## 119. ಮೀನುಗಾರರಿಗೂ ಕಿಸಾನ್ ಕಾರ್ಡ್

ಪ್ರಧಾನ ಮಂತ್ರಿಯವರ ಯೋಜನೆಯಂತೆ ಮುಂದಿನ ದಿನಗಳಲ್ಲಿ ರೈತರ ಮಾದರಿಯಲ್ಲಿ ಮೀನುಗಾರರಿಗೂ ಕಿಸಾನ್ ಕಾರ್ಡ್ ಮೂಲಕ ಸೌಲಭ್ಯ ನೀಡಲಾಗುವುದು ಎಂದು ಮುಜರಾಯಿ, ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವ ಕೋಟಾ ಶ್ರೀನಿವಾಸ ಪೂಜಾರಿ ತಿಳಿಸಿದ್ದಾರೆ.

ಮೈಸೂರಿನ ಪ್ರಾದೇಶಿಕ ಆಯುಕ್ತರ ಕಚೇರಿಯಲ್ಲಿ ಮುಜರಾಯಿ, ಮೀನುಗಾರಿಕೆ ಇಲಾಖೆಗಳ ಪ್ರಗತಿ ಪರಿಶೀಲನೆ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಭವಿಷ್ಯದಲ್ಲಿ ಮೀನುಗಾರಿಕೆ ಇಲಾಖೆಗೆ ಸಂಬಂಧಿಸಿದ ಯಾವುದೇ ಸೌಲಭ್ಯಗಳ ವಿತರಣೆಗೆ ರೈತರ ಮಾದರಿಯಲ್ಲಿ ಮೀನುಗಾರರಿಗೂ ಕಿಸಾನ್ ಕಾರ್ಡ್ ನೀಡಲಾಗುವುದು. ಇದರಿಂದ ನೇರವಾಗಿ ಮೀನುಗಾರರು ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಳ್ಳಬಹುದು ಎಂದು ಮಾಹಿತಿ ನೀಡಿದರು.

ಮೀನುಗಾರಿಕೆಯಲ್ಲಿ ತೊಡಗಿಸಿಕೊಂಡಿರುವ ಮಹಿಳೆಯರಿಗೆ ಶೂನ್ಯ ಬಡ್ಡಿದರದಲ್ಲಿ ರೂ.50,000ದವರೆಗೆ ಸಾಲ ಸೌಲಭ್ಯ ನೀಡಲಾಗುವುದು. ಕರಾವಳಿ, ಒಳನಾಡು ಮೀನುಗಾರಿಕೆ ಅಭಿವೃದ್ಧಿಯ ದೃಷ್ಟಿಯಿಂದ ರಾಜ್ಯದಲ್ಲಿರುವ 28,000 ಕೆರೆಗಳನ್ನು ಮೀನುಗಾರಿಕೆಗೆ ಯಾವ ರೀತಿ ಬಳಕೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಚಿಂತಿಸಲಾಗುತ್ತಿದೆ. ಬಡವರು, ನಿರುದ್ಯೋಗಿಗಳು ನಿರ್ವಹಣೆ ಮಾಡುವುದಾದರೆ ಅವರಿಗೆ ಕಿಸಾನ್ ಕಾರ್ಡ್ ಮುಖಾಂತರ ಕೆರೆಗಳಲ್ಲಿ ಮೀನುಗಾರಿಕೆ ನಡೆಸಲು ಅವಕಾಶ ನೀಡಲು ಚರ್ಚಿಸಲಾಗುತ್ತಿದೆ.

ರಾಜ್ಯದ ಎರಡು ಲಕ್ಷ ಹೆಕ್ಟೇರ್ ಸವಳು–ಜವಳು ಭೂಮಿಯನ್ನು ಅಭಿವೃದ್ಧಿಪಡಿಸಿ ಮೀನುಗಾರಿಕೆಗೆ ಬಳಕೆ ಮಾಡಿಕೊಳ್ಳಲು ಚಿಂತನೆ ನಡೆದಿದೆ. ಈ ಬಗ್ಗೆ ಚರ್ಚಿಸಲು ಜೂನ್ 30ರಂದು ಮೀನುಗಾರರ ಸಭೆ ಕರೆದು ಚರ್ಚಿಸಲಾಗುವುದು, ರಾಜ್ಯದಲ್ಲಿ ಒಳನಾಡು ಮೀನುಗಾರಿಕೆಯಲ್ಲಿ ನಾಲ್ಕೂವರೆ ಲಕ್ಷ, ಕರಾವಳಿಯಲ್ಲಿ ನಾಲ್ಕು ಲಕ್ಷ ಸೇರಿದಂತೆ ರಾಜ್ಯದಲ್ಲಿ ಒಟ್ಟು ಅಂದಾಜು ಎಂಟೂವರೆ ಲಕ್ಷ ಕುಟುಂಬಗಳು ಮೀನುಗಾರಿಕೆಯಲ್ಲಿ ತೊಡಗಿಸಿಕೊಂಡಿವೆ. ಇವರಿಗೆ ಅಗತ್ಯ ಸೌಲಭ್ಯ ನೀಡುವ ಮುಖಾಂತರ ಉತ್ಪಾದನೆ ಹೆಚ್ಚಿಸಲಾಗುವುದು. ಒಳನಾಡು ಮೀನುಗಾರಿಕೆಯಿಂದ ಮೈಸೂರು ಜಿಲ್ಲೆಯಲ್ಲಿ 9000 ಮೆಟ್ರಿಕ್ ಟನ್ ಮೀನು ಉತ್ಪಾದನೆಯಾಗುತ್ತಿದೆ. ಇದನ್ನು ದುಪ್ಪಟ್ಟು ಮಾಡುವ ಬಗ್ಗೆ ಆಲೋಚಿಸಲಾಗುತ್ತಿದೆ," ಎಂದು ತಿಳಿಸಿದರು

ಆಧಾರ:ವಿಜಯ ಕರ್ನಾಟಕ, ದಿನಾಂಕ:25.06.2020